ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ



# ಸ್ವಚ್ಛತಾ ಸಾರಥಿಯಾಗಿ ಮಹಿಳಾ ಸಬಲೀಕರಣಕ್ಕೆ ಕೈಗನ್ನಡಿಯಾಗಿರುವ ಭೇರ್ಯದ ದಿವ್ಯಾ

'ತೊಟ್ಟಿಲು ತೂಗುವ ಕೈ ಜಗತ್ತನ್ನೇ ತೂಗಬಲ್ಲದು' ಎಂಬ ನಾಣ್ಣುಡಿಗೆ ಸರಿಸಾಟಿಯಾಗಿ ಇಂದಿನ ದಿನಗಳಲ್ಲಿ ಮಹಿಳೆಯು ಎಲ್ಲಾ ಕ್ಷೇತ್ರಗಳಲ್ಲೂ ತನ್ನದೇ ಆದ ಛಾಪು ಮೂಡಿಸುತ್ತಿದ್ದಾಳೆ. ಅದರಲ್ಲೂ ವಿಶೇಷವಾಗಿ ಸರ್ಕಾರವು ಗ್ರಾಮೀಣ ಭಾಗದ ಮಹಿಳೆಯರ ಸಬಲೀಕರಣಕ್ಕೆ ಒತ್ತು ನೀಡಿದ್ದು, ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿ ಸ್ಥಳೀಯ ಮಟ್ಟದಲ್ಲಿಯೇ ಮಹಿಳೆಯರಿಗೆ ಉದ್ಯೋಗ ಸೃಷ್ಟಿಸಲಾಗುತ್ತಿದೆ. ಇದರ ಸದುಪಯೋಗ ಪಡೆದ ಯುವತಿಯೊಬ್ಬರು ಗ್ರಾಮದ ಸ್ವಚ್ಛತೆಗೆ ಪಣತೊಟ್ಟಿದ್ದು, ಕಸ ಸಂಗ್ರಹಿಸಿ ವಿಲೇವಾರಿ ಮಾಡುವ ಮೂಲಕ ಸ್ವಚ್ಛತಾ ವಾಹನದ ಸಾರಥಿಯಾಗಿ ರಾಜ್ಯಕ್ಕೆ ಮಾದರಿಯಾಗಿದ್ದಾರೆ.

ಇದು ಸಾಲಿಗ್ರಾಮ ತಾಲ್ಲೂಕಿನ ಭೇರ್ಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಸ ಸಂಗ್ರಹ ವಾಹನ ಚಾಲಕಿಯಾಗಿ ಕಾರ್ಯನಿರ್ವಹಿಸುತ್ತಿರುವ ಗ್ರಾಮದ ಬಿ.ಜಿ.ದಿವ್ಯಾ ಅವರ ಯಶೋಗಾಥೆ. ಗ್ರಾಮದಲ್ಲಿ ಕಸ ಸಂಗ್ರಹಣೆ ಮಾಡುವ ಮೂಲಕ ಸ್ವಚ್ಛ ಭಾರತ ಅಭಿಯಾನಕ್ಕೆ ಕೈಜೋಡಿಸುತ್ತಿದ್ದಾರೆ. ಕೆಲಸ ಯಾವುದಾದರೇನು ಛಲವೊಂದಿದ್ದರೆ ಎಲ್ಲವನ್ನೂ ಸಾಧಿಸಬಹುದು ಎನ್ನುವುದಕ್ಕೆ ಭೇರ್ಯ ಗ್ರಾಮದ ಬಿ.ಜಿ.ದಿವ್ಯಾ ಸಾಕ್ಷಿಯಾಗಿದ್ದಾರೆ.
“ಸಂತೋಷದಿಂದಲೇ ಈ ವೃತ್ತಿಯನ್ನು ಆರಂಭಿಸಿದ್ದೇನೆ. ಸರ್ಕಾರ ನನ್ನಂತಹವರನ್ನು ಗುರುತಿಸಿ ಚಾಲಕಿಯಾಗಲು ಬೇಕಾದ ಎಲ್ಲ ತರಬೇತಿಯನ್ನೂ ನೀಡಿದೆ. ದ್ವಿತೀಯ ಪಿಯುಸಿ ವ್ಯಾಸಂಗ ಪೂರ್ಣಗೊಳಿಸಿದ್ದು ಈಗ ಗ್ರಾಮ ಪಂಚಾಯಿತಿಯ ಕಸ ಸಂಗ್ರಹ ವಾಹನ ಚಾಲಕಿಯಾಗಿ ದುಡಿಯುತ್ತಿದ್ದೇನೆ. ನನಗೆ ಈ ಕೆಲಸದಲ್ಲಿ ತೃಪ್ತಿ ಇದೆ” ಎನ್ನುತ್ತಾರೆ ದಿವ್ಯಾ.




## ಮಹಿಳೆಯರ ಸ್ವಾವಲಂಬಿ ಬದುಕಿಗೆ ಆಸರೆಯಾದ ಸ್ವಚ್ಛ ಭಾರತ್ ಮಿಷನ್

ಮಹಿಳೆಯರ ಆರ್ಥಿಕ ಭದ್ರತೆ, ಸ್ವಾವಲಂಬಿ ಬದುಕು, ಸಬಲೀಕರಣಕ್ಕಾಗಿ ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿ ವಾಹನ ಚಾಲನೆ ತರಬೇತಿ ಕೊಡಿಸಿ ಉದ್ಯೋಗ ನೀಡುವ ಮೂಲಕ ಸರ್ಕಾರ ಮಹತ್ವದ ಹೆಜ್ಜೆಯಿಟ್ಟಿದೆ. ಗ್ರಾಮೀಣ ಭಾಗದ ಹಲವು ಮಹಿಳೆಯರಿಗೆ ಚಾಲನಾ ತರಬೇತಿ ನೀಡಿ ಅವರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಬೆನ್ನೆಲುಬಾಗಿ ನಿಂತಿದೆ. ತರಬೇತಿ ಪಡೆದ ಮಹಿಳಾ ಚಾಲಕಿಯರನ್ನು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕಸ ಸಂಗ್ರಹಿಸುವ ಸ್ವಚ್ಛತಾ ವಾಹಿನಿಯ ಚಾಲಕಿಯರಾಗಿ ನೇಮಕ ಮಾಡುವ ಮೂಲಕ, ಗ್ರಾಮೀಣ ಮಹಿಳೆಯರಿಗೆ ಉದ್ಯೋಗ ಸೃಷ್ಟಿಸಲಾಗುತ್ತಿದೆ.

## ಮನೆ ಬಾಗಿಲಿಗೆ ಸ್ವಚ್ಛತಾ ವಾಹಿನಿ

ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಪ್ರತಿ ಗ್ರಾಪಂಗೆ ಒಂದು ಸ್ವಚ್ಛತಾ ವಾಹಿನಿ ಒದಗಿಸಿದ್ದು, ಈ ವಾಹನದೊಟ್ಟಿಗೆ ಪ್ರತಿ ಮನೆ ಬಾಗಿಲಿಗೆ ಬರುವ ಸಿಬ್ಬಂದಿಯು ಮನೆ ಹಂತದಲ್ಲಿಯೇ ಬೇರ್ಪಡಿಸಿರುವ ಹಸಿ ಮತ್ತು ಒಣ ಕಸವನ್ನು ಸಂಗ್ರಹಿಸುತ್ತಾರೆ. ಈ ಮೂಲಕ ಗ್ರಾಮಗಳನ್ನು ಕಸಮುಕ್ತಗೊಳಿಸುವಲ್ಲಿ ಶ್ರಮಿಸುತ್ತಿದ್ದಾರೆ.

ಮಹಿಳೆಯೊಬ್ಬರು ನಮ್ಮ ಗ್ರಾಮ ಪಂಚಾಯಿತಿಯಲ್ಲಿ ಕಸ ಸಂಗ್ರಹ ವಾಹನ ಚಾಲಕಿಯಾಗಿ ಕೆಲಸ ಮಾಡುತ್ತಿರುವುದು ಸಂತಸದ ವಿಚಾರ. ದಿವ್ಯಾ ಅವರು ತಾಲ್ಲೂಕಿನಲ್ಲಿ ಮಾದರಿಯಾಗಿ ಕೆಲಸ ಮಾಡಲಿ. ಪಂಚಾಯಿತಿ ವತಿಯಿಂದ ಸಂಪೂರ್ಣ ಸಹಕಾರ ನೀಡಲಾಗುತ್ತದೆ.

**-ಬಿ.ಕೆ.ಮಂಜಪ್ಪ,**
ಅಧ್ಯಕ್ಷರು, ಭೇರ್ಯ ಗ್ರಾ.ಪಂ

“ಕೆ.ಆರ್.ನಗರ ಮತ್ತು ಸಾಲಿಗ್ರಾಮ ಅವಳಿ ತಾಲ್ಲೂಕಿನಲ್ಲಿರುವ 24 ಗ್ರಾಮ ಪಂಚಾಯಿತಿಗಳ ಪೈಕಿ ಈಗಾಗಲೇ ಐದು ಗ್ರಾಮ ಪಂಚಾಯಿತಿಗಳಲ್ಲಿ ಕಸ ವಿಲೇವಾರಿ ವಾಹನಗಳ ಮಹಿಳಾ ಚಾಲಕಿಯರಿಗೆ ತರಬೇತಿ ಕೊಡಿಸಲಾಗುತ್ತಿದೆ. ಭೇರ್ಯ ಗ್ರಾಮ ಪಂಚಾಯಿತಿಯಲ್ಲಿ ಈಗಾಗಲೇ ಮಹಿಳಾ ಚಾಲಕಿಯಾಗಿ ದಿವ್ಯಾ ಕಾರ್ಯನಿರ್ವಹಿಸುತ್ತಿದ್ದಾರೆ.”

**-ಕುಲದೀಪ್,**
ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ

“ಚಾಲನಾ ತರಬೇತಿ ಪಡೆದು ಗ್ರಾಮ ಪಂಚಾಯಿತಿಯಲ್ಲಿ ಕಸ ಸಂಗ್ರಹ ವಾಹನ ಚಾಲಕಿಯಾಗಿ ದಿವ್ಯಾ ಕಾರ್ಯ ನಿರ್ವಹಿಸುತ್ತಿದ್ದಾರೆ. ಗ್ರಾಮದ ಸ್ವಚ್ಛತಾ ಆಂದೋಲನದಡಿ ಮನೆ ಮನೆಯಲ್ಲಿ ಅರಿವು ಮೂಡಿಸುವ ಕೆಲಸ ಮಾಡುತ್ತಿದ್ದಾರೆ. ಇದು ಇತರೆ ಮಹಿಳೆಯರಿಗೆ ಪ್ರೇರಣೆಯಾಗಿದೆ.”

**-ಮಮತ,**
ಪಿಡಿಒ, ಭೇರ್ಯ ಗ್ರಾ.ಪಂ